**File No.AGRI-AMS/37/2020-AGRI_PLAN_B-AGRICULTUR**

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: 2020-21ನೇ ಸಾಲಿನಲ್ಲಿ ಕೇಂದ್ರ ಪುರಸ್ಕೃತ "Rainfed Area Development" ಕಾರ್ಯಕ್ರಮಕ್ಕೆ (NMSA-RAD)" ಕಾರ್ಯಕ್ರಮಕ್ಕೆ 2019-20ನೇ ಸಾಲಿನಲ್ಲಿ ವೆಚ್ಚವಾಗದೇ ಬಾಕಿ ಉಳಿದಿರುವ ಅನುದಾನವನ್ನು ಮರುಮೌಲ್ಯೀಕರಿಸಿ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: AGRI-AML-91/2020, ದಿನಾಂಕ:02.06.2020 ಮತ್ತು ಸೇರ್ಪಡೆ ಆದೇಶ ದಿನಾಂಕ:16.06.2020.

2. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: : 2-3/2017-RFS-III, ದಿನಾಂಕ:16.04.2020.

3.ಕೃಷಿ ಆಯುಕ್ತರಿಂದ ಸ್ವೀಕೃತವಾಗಿರುವ ಪ್ರಸ್ತಾವನೆ ಸಂಖ್ಯೆ: ಉಕೃನಿ/ರನಿಪ್ರ/NMSA-RAD/ಅ.ಬಿ/2020-21, ದಿನಾಂಕ:15.06.2020.

*****

ಪ್ರಸ್ತಾವನೆ:

2020-21ನೇ ಸಾಲಿನ ಆಯವ್ಯಯ ಸಂಪುಟ-3ರಲ್ಲಿ ಕೇಂದ್ರ ಪುರಸ್ಕೃತ "Rainfed Area Development ಯೋಜನೆ ಲೆಕ್ಕ ಶೀರ್ಷಿಕೆ: 2401-00-108-1-16 ಅಡಿ ಒಟ್ಟು ರೂ. 1667.00.00 ಲಕ್ಷಗಳನ್ನು ನಿಗದಿಪಡಿಸಲಾಗಿದೆ.

ಮೇಲೆ ಓದಲಾದ (1)ರ ಸರ್ಕಾರದ ಆದೇಶ ಮತ್ತು ಸೇರ್ಪಡೆ ಆದೇಶದಲ್ಲಿ, ಕೇಂದ್ರ ಪುರಸ್ಕೃತ Rainfed Area Development ಯೋಜನೆಯನ್ನು 2020-21ನೇ ಸಾಲಿಗೆ ಮುಂದುವರೆಸುತ್ತಾ, ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2)ರ ಕೇಂದ್ರ ಸರ್ಕಾರದ ಪತ್ರದಲ್ಲಿ, ಕೇಂದ್ರ ಪುರಸ್ಕೃತ National Mission on Sustainable Agriculture-"ಮಳೆಯಾಶ್ರಿತ ಪ್ರದೇಶಾಭಿವೃದ್ಧಿ (NMSA-RAD) ಯೋಜನೆಯಡಿ 2019-20ನೇ ಸಾಲಿನಲ್ಲಿ ಬಿಡುಗಡೆಯಾಗಿ ವೆಚ್ಚವಾಗದೇ ಉಳಿಕೆಯಾಗಿದ್ದ ಅನುದಾನವನ್ನು ಮರುಮೌಲ್ಯೀಕರಿಸಿ 2020-21ನೇ ಸಾಲಿನಲ್ಲಿ ಬಳಕೆ ಮಾಡಲು ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (3)ರ ಕೃಷಿ ಆಯುಕ್ತರ ಪ್ರಸ್ತಾವನೆಯಲ್ಲಿ ಕೇಂದ್ರ ಪುರಸ್ಕೃತ "National Mission on Sustainable Agriculture-ಮಳೆಯಾಶ್ರಿತ ಪ್ರದೇಶಾಭಿವೃದ್ಧಿ (NMSA-RAD)" ಯೋಜನೆಯಡಿಯಲ್ಲಿ 2019-20ನೇ ಸಾಲಿನಲ್ಲಿ ಬಿಡುಗಡೆಯಾಗಿದ್ದ ಮೊದಲನೇ ಕಂತಿನ ಅನುದಾನದಲ್ಲಿ ವೆಚ್ಚವಾಗದೇ ಬಾಕಿ ಉಳಿದಿರುವ ಅನುದಾನ ರೂ.49.04 ಲಕ್ಷಗಳು ಹಾಗೂ ಕೇಂದ್ರ ಸರ್ಕಾರದಿಂದ ಬಿಡುಗಡೆಯಾಗಿದ್ದ ಎರಡನೇ ಕಂತಿನ ಅನುದಾನ ರೂ.354.10 ಲಕ್ಷಗಳಿಗೆ ಪೂರಕವಾಗಿ ರಾಜ್ಯದ ಪಾಲಿನ ಅನುದಾನ ರೂ.236.07 ಲಕ್ಷಗಳನ್ನು ಸೇರಿಸಿ ಒಟ್ಟು ರೂ.590.17 ಲಕ್ಷಗಳು, ಒಟ್ಟಾರೆ ರೂ.639.21 ಲಕ್ಷಗಳನ್ನು ಈ ಕೆಳಕಂಡಂತೆ ಬಿಡುಗಡೆ ಮಾಡುವಂತೆ ಕೃಷಿ ಆಯುಕ್ತರು ಕೋರಿರುತ್ತಾರೆ.

(ಅನುದಾನ ರೂ.ಲಕ್ಷಗಳಲ್ಲಿ)

| ವಿವರ | ಉಪ ಲೆಕ್ಕಶೀರ್ಷಿಕೆ | ಕೇಂದ್ರ | ರಾಜ್ಯ | ಒಟ್ಟು |
|---|---|---|---|---|
| 2019-20ನೇ ಸಾಲಿನಲ್ಲಿ ಬಿಡುಗಡೆಯಾಗಿದ್ದ ಮೊದಲನೇ ಕಂತಿನಲ್ಲಿ ಉಳಿಕೆ | ಸಾಮಾನ್ಯ (106) | 9.00 | 6.00 | 15.00 |
| | ಪ.ಜಾ ಉಪಯೋಜನೆ (422) | 14.29 | 9.52 | 23.81 |
| | ಪ.ಪಂ ಉಪಯೋಜನೆ (423) | 6.14 | 4.09 | 10.23 |
| | **ಒಟ್ಟು** | **29.43** | **19.61** | **49.04** |
| 2019-20ನೇ ಸಾಲಿನಲ್ಲಿ ಬಿಡುಗಡೆಯಾಗಬೇಕಿದ್ದ ಎರಡನೇ ಕಂತಿನ ವಿವರ | ಸಾಮಾನ್ಯ (106) | 268.76 | 179.17 | 447.93 |
| | ಪರಿಶಿಷ್ಟ ಜಾತಿ ಉಪಯೋಜನೆ (422) | 60.55 | 40.37 | 100.92 |
| | ಪರಿಶಿಷ್ಟ ಪಂಗಡ ಉಪಯೋಜನೆ (423) | 24.79 | 16.53 | 41.32 |
| | **ಒಟ್ಟು** | **354.10** | **236.07** | **590.17** |
| ಒಟ್ಟು ಮೊತ್ತ | ಸಾಮಾನ್ಯ (106) | 277.76 | 185.17 | 462.93 |
| | ಪರಿಶಿಷ್ಟ ಜಾತಿ ಉಪಯೋಜನೆ (422) | 74.84 | 49.89 | 124.73 |
| | ಪರಿಶಿಷ್ಟ ಪಂಗಡ ಉಪಯೋಜನೆ (423) | 30.93 | 20.62 | 51.55 |
| | **ಒಟ್ಟು** | **383.53** | **255.68** | **639.21** |

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 37 ಕೃಉಇ 2020, ಬೆಂಗಳೂರು, ದಿನಾಂಕ:16.07.2020.**

ಕೇಂದ್ರ ಪುರಸ್ಕೃತ "ರಾಷ್ಟ್ರೀಯ ಸುಸ್ಥಿರ ಕೃಷಿ ಅಭಿಯಾನ – ಮಳೆಯಾಶ್ರಿತ ಪ್ರದೇಶಾಭಿವೃದ್ಧಿ (NMSA-RAD) ಯೋಜನೆಯಡಿ 2019-20ನೇ ಸಾಲಿನಲ್ಲಿ ವೆಚ್ಚವಾಗದೇ ಉಳಿಕೆಯಾಗಿದ್ದ ಮರುಮೌಲ್ಯೀಕರಣಗೊಂಡ ಕೇಂದ್ರದ ಪಾಲಿನ ರೂ. 383.53 ಲಕ್ಷಗಳಿಗೆ ರಾಜ್ಯದ ಪಾಲಿನ ಅನುದಾನ ರೂ. 255.68 ಲಕ್ಷಗಳನ್ನು (ಶೇ.40) ಸೇರಿಸಿ ಒಟ್ಟು **ರೂ. 639.21 ಲಕ್ಷಗಳನ್ನು** (ಆರು ನೂರ ಮುವತ್ತೊಂಬತ್ತು ಲಕ್ಷದ ಇಪ್ಪತ್ತೊಂದು

ಸಾವಿರ ರೂಪಾಯಿಗಳು ಮಾತ್ರ) 2020–21ನೇ ಸಾಲಿನ Rainfed Area Development ಯೋಜನೆಯ ಲೆಕ್ಕ ಶೀರ್ಷಿಕೆ: 2401–00–108–1–16 ರಡಿ ಒದಗಿಸಿರುವ ಅನುದಾನದಿಂದ ಈ ಕೆಳಕಂಡಂತೆ ವರ್ಗವಾರು ಬಿಡುಗಡೆ ಮಾಡಲಾಗಿದೆ ಹಾಗೂ ಸದರಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಮಂಜೂರಾತಿ ನೀಡಿದೆ.

(ರೂ. ಲಕ್ಷಗಳಲ್ಲಿ)

| ಉಪ ಲೆಕ್ಕಶೀರ್ಷಿಕೆ | ಕೇಂದ್ರ | ರಾಜ್ಯ | ಒಟ್ಟು |
|---|---|---|---|
| ಸಾಮಾನ್ಯ (106) | 277.76 | 185.17 | 462.93 |
| ಪರಿಶಿಷ್ಟ ಜಾತಿ ಉಪಯೋಜನೆ (422) | 74.84 | 49.89 | 124.73 |
| ಪರಿಶಿಷ್ಟ ಪಂಗಡ ಉಪಯೋಜನೆ (423) | 30.93 | 20.62 | 51.55 |
| **ಒಟ್ಟು** | **383.53** | **255.68** | **639.21** |

ಸದರಿ ಬಿಡುಗಡೆ ಮಾಡಲಾದ ಅನುದಾನವನ್ನು ಕೃಷಿ ಇಲಾಖೆಯು ಜಲಾನಯನ ಅಭಿವೃದ್ಧಿ ಇಲಾಖೆಯ CCO ಗೆ ನೀಡಿ ಕಾರ್ಯಕ್ರಮ ಅನುಷ್ಠಾನಗೊಳಿಸಲು ಅನುಮೋದಿಸಿದೆ.

ಕೃಷಿ ನಿರ್ದೇಶಕರು / ಜಲಾನಯನ ಅಭಿವೃದ್ಧಿ ಇಲಾಖೆಯ ನಿರ್ದೇಶಕರು ಕೇಂದ್ರ ಸರ್ಕಾರವು Rainfed Area Development ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಆಗ್ಗಿಂದಾಗ್ಗೆ ಹೊರಡಿಸುವ ಮಾರ್ಗಸೂಚಿ ಅನುಸಾರ ಯೋಜನೆಯನ್ನು ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ/02/ಟಿಎಫ್‌ಪಿ/2020, ದಿನಾಂಕ: 30.05.2020ರಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿರುವ ಆರ್ಥಿಕ ಅಧಿಕಾರದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ

ಮತ್ತು ಅವರ ಹೆಸರಿನಲ್ಲಿ

P. Sathi 16/7/2020

(ಪಿ.ಸತ್ಯಭಾಮ)

ಸರ್ಕಾರದ ಅಧೀನ ಕಾರ್ಯದರ್ಶಿ

ಕೃಷಿ ಇಲಾಖೆ (ಯೋಜನೆ)

ಇವರಿಗೆ:–

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ ಎಸ್ ಎ)/ (ಇ& ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು–01

2. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಬೆಂಗಳೂರು.

3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.

4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.

5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.

6. ಕೃಷಿ ಆಯುಕ್ತರು/ಕೃಷಿ ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.

7. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಕಾವೇರಿ ಭವನ, ಬೆಂಗಳೂರು.

8. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.

9. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.

10. ನಿರ್ದೇಶಕರು, TNMC, ಖನಿಜ ಭವನ, ಬೆಂಗಳೂರು.

11. ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.

12. ಸರ್ಕಾರದ ಅಧೀನ ಕಾರ್ಯದರ್ಶಿ (FR & CC), ಆರ್ಥಿಕ ಇಲಾಖೆ, ಬೆಂಗಳೂರು.

13. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ – 4&5), ಆರ್ಥಿಕ ಇಲಾಖೆ, ಬೆಂಗಳೂರು.

14. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

*****